ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/36/ಪ್ರವೇಶಾತಿ ಮಾರ್ಗಸೂಚಿ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:18.06.2022

**ಸುತ್ತೋಲೆ**

**ವಿಷಯ:** 2022-23ನೇ ಸಾಲಿನಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಯುಯುಸಿಎಂಎಸ್ (UUCMS) ಮುಖಾಂತರ ಆನ್‌ಲೈನ್ ಪ್ರವೇಶ ಪ್ರಕ್ರಿಯೆಯನ್ನು ಕೈಗೊಳ್ಳುವ ಕುರಿತು.

**ಉಲ್ಲೇಖ :** ಸರ್ಕಾರಿ ಆದೇಶ ಸಂಖ್ಯೆ: ಇಡಿ 34 ಇಜಿಒವಿ 2020 (ಭಾಗ-2) ಬೆಂಗಳೂರು, ದಿನಾಂಕ:10.06.2022.

********

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾಲಯಗಳು ಮತ್ತು ವಿಶ್ವವಿದ್ಯಾಲಯಗಳ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ತರಗತಿಗಳಿಗೆ ಪ್ರವೇಶಾತಿಯನ್ನು ಯುಯುಸಿಎಂಎಸ್ (UUCMS) ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರ ನಡೆಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಸೂಚಿಸಲಾಗಿರುತ್ತದೆ. ಅದರಂತೆ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಯುಯುಸಿಎಂಎಸ್ (UUCMS) ಆನ್‌ಲೈನ್ ತಂತ್ರಾಂಶದಲ್ಲೇ ಅರ್ಜಿಗಳನ್ನು ಆಹ್ವಾನಿಸಿ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಸೂಚಿಸಲಾಗಿದೆ.

ಮುಂದುವರೆದು ಸಂಬಂಧಿಸಿದ ವಿಶ್ವವಿದ್ಯಾಲಯಗಳ ಮಾರ್ಗಸೂಚಿಗಳನ್ವಯ ಯುಯುಸಿಎಂಎಸ್ (UUCMS) ತಂತ್ರಾಂಶದ ಮೂಲಕ ಪ್ರವೇಶಾತಿ ಕ್ರಮ ವಹಿಸುವುದು ಹಾಗೂ ಕಾಲೇಜುಗಳಲ್ಲಿ ಲಭ್ಯವಿರುವ ಕೋರ್ಸ್ / ಕಾಂಬಿನೇಷನ್‌ಗಳ ವಿವರ, ಶುಲ್ಕಗಳ ವಿವರ ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು ಹಾಗೂ ಯುಯುಸಿಎಂಎಸ್ (UUCMS) ವೆಬ್‌ಸೈಟ್‌ನ ಮಾಹಿತಿಯನ್ನು ಕಾಲೇಜಿನ ಅಂತರ್ಜಾಲ ತಾಣದಲ್ಲಿ (Website) ಹಾಗೂ ಸೂಚನಾ ಫಲಕದಲ್ಲಿ (Notice board) ಕಡ್ಡಾಯವಾಗಿ ಪ್ರಕಟಿಸುವುದು. ಪ್ರಾಂಶುಪಾಲರು ಕಾಲೇಜುಗಳ ಹಂತದಲ್ಲಿ ಪ್ರವೇಶಾತಿ ಸಮಿತಿಯನ್ನು ರಚಿಸಿಕೊಂಡು ಅಗತ್ಯವಿರುವ help desk ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಹಾಗೂ ಅಗತ್ಯ ನೆರವು ನೀಡಬೇಕಾಗಿರುತ್ತದೆ. ಅಲ್ಲದೆ ಕಾಲೇಜಿನ ಎಲ್ಲಾ ಬೋಧಕ / ಬೋಧಕೇತರ ಸಿಬ್ಬಂದಿಗಳು ಪ್ರವೇಶಾತಿ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶ ಪಡೆಯಲು ಕ್ರಮವಹಿಸುವುದು.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

<u>ಪ್ರತಿಯನ್ನು:</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆ- ಮಾಹಿತಿಗಾಗಿ.
4. ಕಛೇರಿ ಪ್ರತಿ.